# ಮಕ್ಕಳು ಕಲಿಕೆಯೊಂದಿಗೆ ಸಂವಹನ ಕಲೆಗಳನ್ನು ಮೈಗೂಡಿಸಿಕೊಳ್ಳಬೇಕು




**ಕಾರ್ಕಳ:** ಬದಲಾಗುತ್ತಿರುವ ಆಧುನಿಕ ಜಗತ್ತಿನಲ್ಲಿ ಆಂಗ್ಲ ಭಾಷೆ ಬಹಳ ಪ್ರಾಮುಖ್ಯತೆ ಹೊಂದಿದೆ. ಇಂದಿನ ವಿದ್ಯಾರ್ಥಿಗಳು ಕಲಿಕೆಯ ಜೊತೆಗೆ ಸಂವಹನ ಕಲೆಗಳನ್ನು ಮೈಗೂಡಿಸಿಕೊಂಡಲ್ಲಿ ಸ್ಪರ್ಧಾತ್ಮಕ ಜಗತ್ತನ್ನು ಸಮರ್ಥವಾಗಿ ಎದುರಿಸಲು ಸಾಧ್ಯ ಎಂದು ಸ್ಟಾನಿಸ್ಲಾಸ್ ರೆಬೆಲ್ಲೊ ಹೇಳಿದ್ದಾರೆ.

ಅವರು ಮಂಜುನಾಥ ಪೈ ಸ್ಮಾರಕ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಸ್ನಾತಕೋತ್ತರ ವಿಭಾಗ ಆಯೋಜಿಸಿದ 30 ಗಂಟೆಗಳ ಸ್ಪೋಕನ್ ಇಂಗ್ಲೀಷ್ ಕೋರ್ಸ್‌ನ ಸಮಾರೋಪ ಸಮಾರಂಭದಲ್ಲಿ ಮಾತನಾಡಿದರು.

ಪ್ರಾಂಶುಪಾಲ ಶ್ರೀವರ್ಮ ಅಜ್ರಿ ಎಂ. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಸ್ನಾತಕೋತ್ತರ ವಿಭಾಗದ ಸಂಚಾಲಕ ಪ್ರೊ. ವಿದ್ಯಾಧರ ಹೆಗ್ಡೆ ಎಸ್., ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥೆ ಪ್ರೊ. ಜ್ಯೋತಿ ಎಲ್. ಜನ್ನೆ, ಸಹಾಯಕ ಪ್ರಾಧ್ಯಾಪಕ ಮಂಜುನಾಥ ಬಿ., ಮೈತ್ರಿ ಬಿ., ಪೂಜಾ ಶೆಣೈ ಉಪಸ್ಥಿತರಿದ್ದರು. ನಿಶ್ಮಿತಾ ಸ್ವಾಗತಿಸಿ, ಜಾನುಪ್ರಿಯಾ ನಾಯರ್ ನಿರೂಪಿಸಿ, ಅಖಿಲೇಶ್ ವಂದಿಸಿದರು.